# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಜಗನಾಥ ಭಾಗೋಡಿ, ಕಾರ್ಯದರ್ಶಿ ಗ್ರೇಡ್-2, ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಿಬ್ಬನ್‌ಪಲ್ಲಿ ಗ್ರಾಮ ಪಂಚಾಯಿತಿ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ: ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ:ಅ.ಸ.ಪ.ಸಂ.ಕಂಪ್ಲೇಂಟ್/ ಉಪಲೋಕ್/ಜಿಎಲ್‌ಬಿ-574/2016/ಡಿಆರ್‌ಇ-3 ದಿನಾಂಕ:23-08-2016

**ಪ್ರಸ್ತಾವನೆ:**ಮೇಲೆ ಓದಲಾದ ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:12-08-2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಜಗನಾಥ ಭಾಗೋಡಿ, ಕಾರ್ಯದರ್ಶಿ ಗ್ರೇಡ್-2, ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಿಬ್ಬನ್‌ಪಲ್ಲಿ ಗ್ರಾಮ ಪಂಚಾಯಿತಿ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆ, ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ 2012-13 ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ನಾಡೇಪಲ್ಲಿ ಪರಮೇಶ್ವರ ಕರೆಯ ನೀರಡಿ ನರಸಪ್ಪಾ ಹೊಲದಿಂದ ದೊಡ್ಡ ಆಶಪ್ಪಾರವರ ಹೊಲದವರೆಗೆ ಕಾಲುವೆ ನಿರ್ಮಾಣ ಕಾಮಗಾರಿಗೆ ರೂ.1,20,000/- ಮಂಜೂರಾಗಿದ್ದು, ಈ ಸಂಬಂಧ ಕಾಮಗಾರಿಯ ಕೂಲಿ ಕಾರ್ಮಿಕರ ಹಣ ರೂ.47,895/- ಗಳನ್ನು ಪಾವತಿಸಲು ಶ್ರೀ ಜಗನಾಥ ಭಾಗೋಡಿ, ಕಾರ್ಯದರ್ಶಿ ಗ್ರೇಡ್-2, ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ರೂ.3,000/- ಗಳ ಲಂಚದ ಹಣದ ಬೇಡಿಕೆಯಿಟ್ಟು ರೂ.2,500/- ಗಳನ್ನು ದಿನಾಂಕ:17.08.2013 ರಂದು ದೂರುದಾರರಾದ ಶ್ರೀ ನರಸ್ಯಾ ನಾಯಕ ತಂದೆ ಭೀಲ್ಯಾ ನಾಯಕ ರಾಠೋಡ, ಸಾ. ನಾಡೇಪಲ್ಲಿ ತಾಂಡಾ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರಿಂದ ಲಂಚದ ಹಣವಾಗಿ ಪಡೆಯುವಾಗ ಲೋಕಾಯುಕ್ತ ಪೋಲೀಸರಿಗೆ ಸಿಕ್ಕಿಬಿದ್ದಿರುತ್ತಾರೆ.

ಶ್ರೀ ಜಗನಾಥ ಭಾಗೋಡಿ, ಕಾರ್ಯದರ್ಶಿ ಗ್ರೇಡ್-2, ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಿಬ್ಬನ್‌ಪಲ್ಲಿ ಗ್ರಾಮ ಪಂಚಾಯಿತಿ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರು ತಮ್ಮ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವತನೆಯಿಂದ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1) (i) ಮತ್ತು (iii) ರಡಿಯಲ್ಲಿ ಉಕ್ತವಾದ ದುರ್ನಡತೆ ಎಸಗಿ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/555/ಗ್ರಾಪಂಕಾ/2016 ಬೆಂಗಳೂರು, ದಿನಾಂಕ: –26–10–2016.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಗನಾಥ ಭಾಗೋಡಿ, ಕಾರ್ಯದರ್ಶಿ ಗ್ರೇಡ್–2, ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಿಬ್ಬನ್‌ಪಲ್ಲಿ ಗ್ರಾಮ ಪಂಚಾಯಿತಿ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆ.
6. ಶ್ರೀ ಜಗನಾಥ ಭಾಗೋಡಿ, ಕಾರ್ಯದರ್ಶಿ ಗ್ರೇಡ್–2, ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಿಬ್ಬನ್‌ಪಲ್ಲಿ ಗ್ರಾಮ ಪಂಚಾಯಿತಿ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆ.
7. ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.